ನಮ್ಮ ಸಂವಿಧಾನ ಶ್ರೇಷ್ಠ: ಮಹದೇವಪ್ಪ

ಹೆಬ್ಬಾಳದಲ್ಲಿ ಕೃಷಿ ವಿವಿ ವಿದ್ಯಾರ್ಥಿ ಸಂಘದಿಂದ ಅಂಬೇಡ್ಕರ್ ಜನ್ಮ ದಿನಾಚರಣೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬಾಬಾ ಸಾಹೇಬ್ ಅಂಬೇಡ್ಕರ್ ಅವರು ನಮಗೆ ನೀಡಿದ ಸಂವಿಧಾನ ವಿಶ್ವದಲ್ಲೇ ಶ್ರೇಷ್ಠವಾದುದಾಗಿದೆ ಎಂದು ಸಮಾಜ ಕಲ್ಯಾಣಸಚಿವಡಾ.ಎಚ್.ಸಿ.ಮಹದೇವಪ್ಪ ಅಭಿಪ್ರಾಯಪಟ್ಟರು.

ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಡಾ.ಬಿ.ಆರ್.ಅಂಬೇಡ್ಕರ್ ವಿದ್ಯಾರ್ಥಿ ಸಂಘದಿಂದ ಹೆಬ್ಬಾಳದ ಜಿಕೆವಿಕೆಯಲ್ಲಿ ಮಂಗಳವಾರ ಆಯೋಜಿಸಿದ್ದ ಡಾ.ಬಿ. ಆರ್. ಅಂಬೇಡ್ಕರ್ ಅವರ 134 ನೇ ಜನ್ಮ ದಿನಾಚರಣೆ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಡಾ.ಬಿ.ಆರ್.ಅಂಬೇಡ್ಕರ್ ವಿದ್ಯಾರ್ಥಿ ಸಂಘದಿಂದ ಹೆಬ್ಬಾಳದ ಜಿಕೆವಿಕೆಯಲ್ಲಿ ಆಯೋಜಿಸಿದ್ದ ಡಾ.ಬಿ.ಆರ್.ಅಂಬೇಡ್ಕರ್ ಅವರ 134 ನೇ ಜನ್ಮ ದಿನಾಚರಣೆ ಸಮಾರಂಭವನ್ನು ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ. ಮಹದೇವಪ್ಪ ಉದ್ಘಾಟಿಸಿದರು. ವಿವಿ ಕುಲಪತಿ ಡಾ.ಎಸ್.ವಿ.ಸುರೇಶ ಮತ್ತಿತರರು ಹಾಜರಿದ್ದರು.

ಅಂಬೇಡ್ಕರ್ ಅವರು ಭಾರತಕ್ಕೆ ನೀಡಿದ ಸಂವಿಧಾನವಿಶ್ವದಲ್ಲೇಶ್ರೇಷ್ಠವಾದುದಾಗಿದೆ. 140 ಕೋಟಿ ಭಾರತೀಯರನ್ನು ರಕ್ಷಿಸುವ ಮಹತ್ತರ ಸಂವಿಧಾನವನ್ನು ಅಂಬೇಡ್ಕರ್ ಅವರು ನಮಗೆ ನೀಡಿದ್ದಾರೆ. ಜಗತ್ತಿನಲ್ಲೇ ಅತಿ ದೊಡ್ಡ ಲಿಖಿತ ಸಂವಿಧಾನ ನಮ್ಮದು. ಭಾರತದ ಸಂವಿಧಾನ ಇಂದಿಗೂ ಅಖಂಡತೆಯನ್ನು ಕಾಯ್ದುಕೊಳ್ಳುವಲ್ಲಿ ಪ್ರಮುಖ ಪಾತ್ರ ವಹಿಸಿದೆ. ಸಂವಿಧಾನವನ್ನು ನಾವು ರಕ್ಷಿಸಿದರೆ ಸಂವಿಧಾನ ನಮ್ಮನ್ನು ರಕ್ಷಿಸುತ್ತದೆ ಎಂದು ಸ್ಪಷ್ಟಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿವಿ ಕುಲಪತಿ ಡಾ.ಎಸ್.ವಿ.ಸುರೇಶ ಮಾತನಾಡಿದರು. ಇದೇ ಸಂದರ್ಭದಲ್ಲಿ ರಂಗಭೂಮಿ ಕಲಾವಿದ ಕೆ.ಸಿ.ಲಕ್ಷ್ಮಣ್ ಅವರಿಗೆ ಅಂಬೇಡ್ಕರ್ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಕರ್ನಾಟಕ ಲೋಕಸೇವಾ ಆಯೋಗದ ಸದಸ್ಯ ಡಾ.ವಿ.ದೇವಪ್ಪ, ವಿವಿಯ ವ್ಯವಸ್ಥಾಪನಾ ಮಂಡಳಿ ಸದಸ್ಯರಾದ ಉಲ್ಲಾಸ್, ಡಾ.ಎಂ.ಚಂದ್ರೇಗೌಡ ಮತ್ತಿತರರು ಉಪಸ್ಥಿತರಿದ್ದರು.

Kanndaprabha pg 04

Hosadiganta pg 10

ಅಂಬೇಡ್ಕರ್ ಆಶಯ ಈಡೇರಿಕೆಗೆ ಶ್ರಮಿಸೋಣ

• **ಬೆಂಗಳೂರು:** 140 ಕೋಟಿ ಭಾರತೀಯರನ್ನು ರಕ್ಷಿಸುವ ಮಹತ್ತರ ಸಂವಿಧಾನವನ್ನು ಡಾ.ಬಿ.ಆರ್.ಅಂಬೇಡ್ಕರ್ ಅವರು ನಮಗೆ ನೀಡಿದ್ದು, ಅವರ ಆಶಯಗಳ ಈಡೇರಿಕೆಗೆ ನಾವು ಶ್ರಮಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಎಚ್.ಸಿ.ಮಹದೇವಪ್ಪ ಕರೆ ನೀಡಿದರು.

ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ ಹಾಗೂ ಡಾ.ಬಿ.ಆರ್. ಅಂಬೇಡ್ಕರ್ ವಿದ್ಯಾರ್ಥಿ ಸಂಘ ಆಯೋಜಿಸಿದ್ದ ಡಾ.ಬಿ.ಆರ್. ಅಂಬೇಡ್ಕರ್‌ರವರ 134ನೇ ಜನ್ಮ ದಿನಾಚರಣೆ ಭೀಮೋತ್ಸವ-2025 ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜಗತ್ತಿನಲ್ಲಿಯೇ ಅತಿ ದೊಡ್ಡ ಲಿಖಿತ ಸಂವಿಧಾನ ನಮ್ಮದು. 140 ಕೋಟಿ ಜನರ ಬದುಕನ್ನು ನಿಯಂತ್ರಣ ಮಾಡುವ ಹಾಗೂ ರಕ್ಷಿಸುವ ಶಕ್ತಿ ನಮ್ಮ ಸಂವಿಧಾನಕ್ಕಿದೆ. ಭಾರತದ ಸಂವಿಧಾನ ಇಂದಿಗೂ ದೇಶದ ಅಖಂಡತೆಯನ್ನು ಕಾಯ್ದುಕೊಳ್ಳುವಲ್ಲಿ ಪ್ರಮುಖ ಪಾತ್ರ ವಹಿಸಿದೆ. ಕೃಷಿಕರ, ಕಾರ್ಮಿಕರ ಹಕ್ಕುಗಳು, ನೀರಾವರಿ ಯೋಜನೆ ರೂಪಿಸುವಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಪಾತ್ರ ಶ್ಲಾಘನೀಯ ಎಂದು ತಿಳಿಸಿದರು. ಅಂಬೇಡ್ಕರ್ ಒಬ್ಬ ಆರ್ಥಿಕ ತಜ್ಞರಾಗಿದ್ದರು. ಅಂದಿನ ದಿನದಲ್ಲಿಯೇ ಅಧಿಕಾರ ವಿಕೇಂದ್ರೀಕರಣದಿಂದ ಮಾತ್ರ ಸಾಮಾಜಿಕ



ಆರ್ಥಿಕ ಬದಲಾವಣೆ ಸಾಧ್ಯ ಹಾಗೂ ಪಂಚಾಯತಿಗಳು ಸಂವಿಧಾನದ ಭಾಗ ಎಂದು ಗಟ್ಟಿಯಾಗಿ ಪ್ರತಿಪಾದಿಸಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ರಂಗಭೂಮಿ ಕಲಾವಿದರು ಹಾಗೂ ನಿರ್ದೇಶಕ ಲಕ್ಷ್ಮಣ್. ಕೆ.ಸಿ ಅವರಿಗೆ ಡಾ. ಬಿ. ಆರ್.ಅಂಬೇಡ್ಕರ್ ಪ್ರಶಸ್ತಿ ನೀಡಿ ಗೌರವಿಸಲಾಯಿತು. ವಿವಿ ಕುಲಪತಿ ಡಾ.ಎಸ್.ವಿ.ಸುರೇಶ, ಕರ್ನಾಟಕ ಲೋಕಸೇವಾ ಆಯೋಗದ ಸದಸ್ಯ ಡಾ.ದೇವಪ್ಪ .ವಿ, ವ್ಯವಸ್ಥಾಪನಾ ಮಂಡಳಿಯ ಸದಸ್ಯ ಉಲ್ಲಾಸ್ ಇತರರು ಇದ್ದರು.